# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 2369 |
| ಸದಸ್ಯರ ಹೆಸರು | : | ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 27.03.2026 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯ ವ್ಯಾಪ್ತಿಯಲ್ಲಿ ಕೆಲವು ಗ್ರಾಮ ಪಂಚಾಯಿತಿಗಳಿಗೆ ಸ್ವಂತ ಕಟ್ಟಡಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ನಿರ್ಮಾಣ ಮಾಡಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ; | ಬಂದಿದೆ.<br><br>ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಸ್ವಂತ ಕಟ್ಟಡಗಳಿಲ್ಲದಿರುವ ಗ್ರಾಮ ಪಂಚಾಯಿತಿಗಳಿಗೆ ಕಟ್ಟಡ ನಿರ್ಮಾಣಕ್ಕಾಗಿ 2022-23ನೇ ಸಾಲಿನಿಂದ 2024-25ನೇ ಸಾಲಿನವರೆಗೆ ಸರ್ಕಾರದಿಂದ ಒದಗಿಸಿರುವ ಅನುದಾನದ ವಿವರವನ್ನು ಅನುಬಂಧ-1ರಲ್ಲಿ ನೀಡಿದೆ. |
| (ಆ) | ಸದರಿ ಗ್ರಾಮ ಪಂಚಾಯಿತಿಗಳಲ್ಲಿ ಸಿಬ್ಬಂದಿಗಳ ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇವುಗಳ ಭರ್ತಿಗೆ ಸರ್ಕಾರ ಕೈಗೊಂಡ ಕ್ರಮವೇನು; | ಬಂದಿದೆ.<br><br>ಖಾಲಿ ಇರುವ ಗ್ರಾಮ ಪಂಚಾಯತಿ ಸಿಬ್ಬಂದಿಗಳು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಮಾಹಿತಿಯನ್ನು ಅನುಬಂಧ-2 ರಲ್ಲಿ ನೀಡಿದೆ.<br><br>ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ 247 ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳ ನೇಮಕಾತಿಗೆ ಕರ್ನಾಟಕ ಲೋಕಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿದ್ದು, ದಿನಾಂಕ:20.02.2026 ರಂದು ಕಲ್ಯಾಣ ಕರ್ನಾಟಕ ವೃಂದದ 97 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ನೇರ ನೇಮಕಾತಿಗಾಗಿ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ.<br><br>ಗ್ರಾಮ ಪಂಚಾಯತಿ ಕಾರ್ಯದರ್ಶಿ ಹಾಗೂ ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-1) ವೃಂದದ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಮುಂಬಡ್ತಿ ಕೋಟಾದಡಿಯಲ್ಲಿ ಖಾಲಿ ಇರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ದಾಖಲಾತಿಗಳ ಪರಿಶೀಲನೆ ಪ್ರಗತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ, ಮುಂಬಡ್ತಿ ಮೂಲಕ ಹುದ್ದೆಗಳ ಭರ್ತಿಗೆ ಕ್ರಮ ವಹಿಸಲಾಗುವುದು.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 886 ಗ್ರಾಪಂಕಾ 2016, ದಿನಾಂಕ:29-09-2020 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಸಿಬ್ಬಂದಿ ಸ್ವರೂಪ, ವೇತನ ಶ್ರೇಣಿಗಳು, ನೇಮಕಾತಿ ವಿಧಾನ ಮತ್ತು ಸೇವಾ ಷರತ್ತುಗಳು) ನಿಯಮಗಳು, 2020 ರಚಿಸಲಾಗಿದ್ದು, ಈ ನಿಯಮಗಳನ್ವಯ ನೇರ ನೇಮಕಾತಿ ಮತ್ತು ಮುಂಬಡ್ತಿ ಮೂಲಕ ಗ್ರಾಮ ಪಂಚಾಯತಿ ಸಿಬ್ಬಂದಿಗಳನ್ನು |

| | | |
|---|---|---|
| | | ನೇಮಕಾತಿ ಮಾಡಲು ಅವಕಾಶವಿರುತ್ತದೆ. ಅದರನ್ವಯ ಕ್ರಮ ವಹಿಸಲಾಗುತ್ತಿದೆ.<br><br>ಪಂಚಾಯತ್ ಆಯುಕ್ತಾಲಯದ ಪತ್ರ ಸಂಖ್ಯೆ:KPRC-GPA/134/2024, 26.06.2024 ರ ಪತ್ರದಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳಲ್ಲಿ ಕರ ವಸೂಲಿಗಾರ, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, ವಾಟರ್ ಆಪರೇಟರ್ ಮತ್ತು ಸ್ವಚ್ಛತಾಗಾರರ ಹುದ್ದೆಗಳಿಗೆ ಜಿಲ್ಲಾ ಪಂಚಾಯಿತಿಯಿಂದ ಈಗಾಗಲೇ ಅನುಮೋದನೆ ಹೊಂದಿರುವ ಸದರಿ ನೌಕರರ ವಯೋ ನಿವೃತ್ತಿಯಿಂದ ಮುಂಬಡ್ತಿಯಿಂದ ಅಥವಾ ಮರಣ ಹೊಂದಿರುವ ಕಾರಣಗಳಿಂದ ಖಾಲಿಯಾಗಿದ್ದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಖಾಲಿಯಾದ ಈ ಮೇಲಿನ 4 ವೃಂದದ ಹುದ್ದೆಗಳಲ್ಲಿ ಯಾರೂ ಕಾರ್ಯನಿರ್ವಹಿಸದೇ ಇದ್ದಲ್ಲಿ, ಸದರಿ ಹುದ್ದೆಗೆ ನೇಮಕ ಮಾಡಿಕೊಳ್ಳಲು ನಿರ್ದೇಶನ ನೀಡಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 01 ಸಹಿಮ 2026 ದಿನಾಂಕ:27.02.2026 ರಲ್ಲಿ ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆ ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಲು ನೀಡಲಾಗಿರುವ ನಿರ್ದೇಶನಗಳನ್ವಯ ಗ್ರಾಮ ಪಂಚಾಯತಿಯಲ್ಲಿ ಖಾಲಿಯಿರುವ ಸಿಬ್ಬಂದಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮ ವಹಿಸಲಾಗುವುದು. |
| (ಇ) | ಸದರಿ ಗ್ರಾಮ ಪಂಚಾಯಿತಿಗಳ ಸದಸ್ಯರ ಅವಧಿ ಮುಕ್ತಾಯವಾಗಿದ್ದು, ಮುಂದಿನ ಅವಧಿಗೆ ಚುನಾವಣೆಗಳನ್ನು ನಡೆಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ? | 1) ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಡಿಸೆಂಬರ್ 2020 ರಲ್ಲಿ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಸಲಾಗಿರುತ್ತದೆ. ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಜನವರಿ-ಫೆಬ್ರುವರಿ 2021 ರಲ್ಲಿ ಚುನಾವಣೆ ನಡೆಸಿ ಆಯ್ಕೆ ಮಾಡಲಾಗಿದ್ದು, ಈ ಅವಧಿಯು ಜನವರಿ-ಫೆಬ್ರುವರಿ-ಮಾರ್ಚ್ 2026 ರವರೆಗೆ ಇರುತ್ತದೆ.<br><br>2) ಸರ್ಕಾರದ ಪತ್ರ ಸಂಖ್ಯೆ: RDPR 486 GPA 2025, ದಿನಾಂಕ:28-01-2026 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಡಿಯಲ್ಲಿ ಗ್ರಾಮ ಪಂಚಾಯತಿಗಳಿಗೆ 2026-31 ನೇ ಸಾಲಿನ ಗ್ರಾಮ ಪಂಚಾಯತಿಯ ಸಾರ್ವತ್ರಿಕ ಚುನಾವಣೆ ನಡೆಸಲು ಬೇಕಾಗಿರುವ ಎಲ್ಲಾ ಅಗತ್ಯ ಪೂರ್ವ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. |

ಸಂಖ್ಯೆ: ಗ್ರಾಅಪ 327 ಗ್ರಾಪಂಅ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

## ಅನುಬಂಧ-1

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ:(2369) 244ಕ್ಕೆ ಉತ್ತರ.**

| ಕ್ರ.ಸಂ | ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯಿತಿ ಹೆಸರು | ಸರ್ಕಾರದಿಂದ ಬಿಡುಗಡೆಯಾದ ಅನುದಾನದ ಮೊತ್ತ (ರೂ. ಲಕ್ಷಗಳಲ್ಲಿ) | ಸಾಲು ಮತ್ತು ಯೋಜನೆ |
|---|---|---|---|---|---|
| 1 | ಕೊಪ್ಪಳ | ಕೊಪ್ಪಳ | ವಣಬಳ್ಳಾರಿ | 20.00 | 2022-23ನೇ ಸಾಲಿನ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ |
| 2 | ಕೊಪ್ಪಳ | ಕೂಕನೂರು | ಮಸಬಹಂಚಿನಾಳ | 20.00 | |
| 3 | ಕೊಪ್ಪಳ | ಕೂಕನೂರು | ನೇಲಜೇರಿ | 20.00 | |
| 4 | ಕೊಪ್ಪಳ | ಕುಷ್ಟಗಿ | ಚಳಗೇರಿ | 20.00 | 2023-24ನೇ ಸಾಲಿನ ಲೆ.ಶೀ.4515-00-102-1-03-386 |
| 5 | ಕೊಪ್ಪಳ | ಕೊಪ್ಪಳ | ಬೆಟಗೇರಿ | 10.00 | 2023-24ನೇ ಸಾಲಿನ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ |
| 6 | ಕೊಪ್ಪಳ | ಕೊಪ್ಪಳ | ಬೋಚನಹಳ್ಳಿ | 10.00 | |
| 7 | ಕೊಪ್ಪಳ | ಕುಕನೂರು | ಯರೇಹಂಚಿನಾಳ | 10.00 | |
| 8 | ಕೊಪ್ಪಳ | ಯಲಬುರ್ಗಾ | ಬಳೂಟಗಿ | 8.00 | 2024-25ನೇ ಸಾಲಿನ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ |
| 9 | ಕೊಪ್ಪಳ | ಕುಷ್ಟಗಿ | ಶಿರಗುಂಪಿ | 8.00 | |
| 10 | ಕೊಪ್ಪಳ | ಕುಷ್ಟಗಿ | ಜಾಗಿರಗುಡದೂರು | 8.00 | |
| 11 | ಕೊಪ್ಪಳ | ಕೊಪ್ಪಳ | ಇಂದರಗಿ | 8.00 | |
| 12 | ಕೊಪ್ಪಳ | ಕೊಪ್ಪಳ | ಹಟ್ಟಿ | 8.00 | |
| 13 | ಕೊಪ್ಪಳ | ಕುಷ್ಟಗಿ | ಮೇಣದಾಳ | 8.00 | |
| 14 | ರಾಯಚೂರು | ಸಿಂಧನೂರು | ಜವಳಗೇರ | 20.00 | 2022-23ನೇ ಸಾಲಿನ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ |
| 15 | ರಾಯಚೂರು | ದೇವಾದುರ್ಗ | ಭೂಮನಗುಂಡ | 20.00 | |
| 16 | ರಾಯಚೂರು | ಲಿಂಗಸುಗೂರು | ಖೈರಾವಾಡಗಿ | 20.00 | |
| 17 | ರಾಯಚೂರು | ರಾಯಚೂರು | ನದಿಗಡ್ಡಿ ಮಲ್ಲಾಪೂರ | 20.00 | |
| 18 | ರಾಯಚೂರು | ಮಸ್ಕಿ | ವಟಗಲ್ | 8.00 | 2024-25ನೇ ಸಾಲಿನ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ |
| 19 | ರಾಯಚೂರು | ಮಸ್ಕಿ | ಚಿಂಚರಕಿ | 8.00 | |
| 20 | ರಾಯಚೂರು | ಮಸ್ಕಿ | ಹಿರೇದಿನ್ನಿ | 8.00 | |

ವಿಧಾನ ಪರಿಷತ್ತಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 2369 ಕ್ಕೆ.

# ಅನುಬಂಧ - 2

## ಪಂಚಾಯತಿ ಅಭಿವೃದ್ದಿ ಅಧಿಕಾರಿ ಹುದ್ದೆಗಳ ವಿವರ

| ಕ್ರ. ಸಂ | ಹುದ್ದೆ | ಕೊಪ್ಪಳ | | | ರಾಯಚೂರು | | |
|---|---|---|---|---|---|---|---|
| | | ಮಂಜೂರು | ಭರ್ತಿ | ಖಾಲಿ | ಮಂಜೂರು | ಭರ್ತಿ | ಖಾಲಿ |
| 1 | ಪಂಚಾಯತಿ ಅಭಿವೃದ್ದಿ ಅಧಿಕಾರಿ | 153 | 142 | 11 | 179 | 128 | 51 |

## ಗ್ರಾಮ ಪಂಚಾಯತಿಗಳಲ್ಲಿ ಖಾಲಿ ಇರುವ ಸಿಬ್ಬಂದಿಯವರ ವಿವರ

| ಕ್ರ. ಸಂ | ಹುದ್ದೆ | ಕೊಪ್ಪಳ | ರಾಯಚೂರು |
|---|---|---|---|
| 1 | ಕರವಸೂಲಿಗಾರ | 14 | 34 |
| 2 | ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್ | 07 | 22 |
| 3 | ವಾಟರ್ ಆಪರೇಟರ್ | - | 03 |
| 4 | ಅಟೆಂಡರ್ | 34 | 48 |
| 5 | ಸ್ವಚ್ಛತಾಗಾರ | 46 | 92 |